ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಶುಕ್ರವಾರ, ದಿನಾಂಕ : 29 ನೇ ಜನವರಿ, 2021

ಎನ್.ಆರ್.ಇ.ಜಿ.ಪಿ ಕಾರ್ಯಕ್ರಮದ ಬಗ್ಗೆ

ಶ್ರೀ ಎಂ. ಎ. ಗೋಪಾಲಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

10 (14) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಎನ್.ಆರ್.ಇ.ಜಿ.ಪಿ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಗೆ ಬಿಡುಗಡೆಯಾದ ಅನುದಾನವೆಷ್ಟು; ಇದರಲ್ಲಿ ಖರ್ಚಾದ ಅನುದಾನವೆಷ್ಟು; (ತಾಲ್ಲೂಕುವಾರು ಪಂಚಾಯತಿವಾರು ವಿವರ ನೀಡುವುದು)

(ಆ) ಈ ಯೋಜನೆಯಡಿ ಕಳೆದ 3 ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಹಾಗೂ ಈ ಕಾಮಗಾರಿಗಳಿಗಾಗಿ ಎಷ್ಟು ವೆಚ್ಚ ಮಾಡಲಾಗಿದೆ ಹಾಗೂ ಎಷ್ಟು ಜನರಿಗೆ ಉದ್ಯೋಗ ಕಲ್ಪಿಸಲಾಗಿದೆ; (ತಾಲ್ಲೂಕುವಾರು ಪಂಚಾಯತಿವಾರು ವಿವರ ನೀಡುವುದು)

(ಇ) ಸದರಿ ಯೋಜನೆಯಡಿ ಕೈಗೆತ್ತಿಕೊಳ್ಳಲಾದ ಕಾಮಗಾರಿಗಳ ನಿಗಾವಹಿಸಲು ಯಾವ ಇಲಾಖೆಯ ಅಭಿಯಂತರರಿಗೆ ಜವಾಬ್ದಾರಿ ವಹಿಸಲಾಗಿದೆ ; ಕಳಪೆ ಗುಣಮಟ್ಟದ ಕಾಮಗಾರಿಗಳನ್ನು ಮಾಡಿದ್ದಲ್ಲಿ ಸಂಬಂಧಪಟ್ಟ ಅಭಿಯಂತರರ ವಿರುದ್ಧ ಯಾವ ಕ್ರಮ ವಹಿಸಲಾಗುವುದು; ಹಾಸನ ಜಿಲ್ಲೆಯಲ್ಲಿ ಅಂತಹ ಪ್ರಕರಣಗಳು ನಡೆದಿವೆಯೇ; (ವಿವರ ನೀಡುವುದು)

(ಈ) ಎನ್.ಆರ್.ಇ.ಜಿ.ಪಿ ಯೋಜನೆಯನ್ನು ಪ್ರಸ್ತುತ ಮುಂದುವರೆಸಲಾಗುತ್ತಿದೆಯೇ? (ಮಾಹಿತಿ ನೀಡುವುದು)